All India Radio: Bangalore
National Bulletin In Kannada
01.04.2025 13.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ದೇಶದ ಡಿಜಿಟಲ್ ಪಾವತಿ ಮೂಲಸೌಕರ್ಯ ಆಧುನೀಕರಣದಲ್ಲಿ ಆರ್‌ಬಿಐ ಮಹತ್ತರ ಪಾತ್ರ ವಹಿಸಿದೆ - ರಾಷ್ಟ್ರಪತಿ ದ್ರೌಪದಿ ಮುರ್ಮು
- ಕೇಂದ್ರ ಸರ್ಕಾರಿ ನೌಕರರಿಗೆ ಏಕೀಕೃತ ಪಿಂಚಣಿ ಯೋಜನೆ- ಯುಪಿಎಸ್ ಇಂದಿನಿಂದ ಜಾರಿ
- ದೆಹಲಿಯಲ್ಲಿ ಇಂದಿನಿಂದ ಮೂರು ದಿನಗಳ ವಿಕಸಿತ ಭಾರತ ಯುವ ಸಂಸತ್ ಆಯೋಜನೆ
- ಇಂದು ಪದ್ಮಭೂಷಣ ಪುರಸ್ಕೃತ ಡಾ.ಶಿವಕುಮಾರ ಸ್ವಾಮೀಜಿ ೧೧೮ನೇ ಜಯಂತೋತ್ಸವ; ಪ್ರಧಾನಿ ಸೇರಿದಂತೆ ಗಣ್ಯರಿಂದ ಗೌರವ ನಮನ
- ಮೆನೋರ್ಕಾ ಓಪನ್ ಟೆನಿಸ್; ಪುರುಷರ ಡಬಲ್ಸ್ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿಂದು ಭಾರತದ ಜೀವನ್ - ವಿಜಯ್ ಜೋಡಿ ಸ್ಪರ್ಧೆ

<><><><>

ದೇಶದ ಡಿಜಿಟಲ್ ಪಾವತಿ ಮೂಲಸೌಕರ್ಯವನ್ನು ನಿರಂತರವಾಗಿ ಆಧುನೀಕರಿಸುವ ಮತ್ತು ಭಾರತವನ್ನು ಡಿಜಿಟಲ್ ಪಾವತಿಗಳಲ್ಲಿ ಜಾಗತಿಕ ನಾಯಕನನ್ನಾಗಿ ಮಾಡುವಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಪ್ರಮುಖ ಪಾತ್ರ ವಹಿಸಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಮುಂಬೈನಲ್ಲಿಂದು ನಡೆದ ಆರ್‌ಬಿಐನ ೯೦ನೇ ವಾರ್ಷಿಕೋತ್ಸವದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಕಳೆದ ಒಂಬತ್ತು ದಶಕಗಳಲ್ಲಿ ಕೇಂದ್ರೀಯ ಬ್ಯಾಂಕಿನ ಗಮನಾರ್ಹ ಬೆಳವಣಿಗೆ ಸರ್ಕಾರದ ದೃಷ್ಟಿಕೋನ ಮತ್ತು ನೀತಿಗಳೊಂದಿಗೆ ಹೊಂದಿಕೆಯಾಗಿದೆ ಎಂದರು. ನಬಾರ್ಡ್, ಐಡಿಬಿಐ ಮತ್ತು ರಾಷ್ಟ್ರೀಯ ವಸತಿ ಬ್ಯಾಂಕ್‌ನಂತಹ ಪ್ರಮುಖ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಹಣಕಾಸು ಪರಿಸರ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಆರ್‌ಬಿಐ ಕೊಡುಗೆ

ಗಮನಾರ್ಹವಾಗಿದ್ದು, ಈ ಸಂಸ್ಥೆಗಳು ಕೃಷಿ, ಸಣ್ಣ ವ್ಯಾಪಾರ ಮತ್ತು ವಸತಿ ಕ್ಷೇತ್ರಗಳಿಗೆ ಅಗತ್ಯ ಬೆಂಬಲವನ್ನು ನೀಡಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದ್ದಾರೆ.

**ಧ್ವನಿ: ರಾಷ್ಟ್ರಪತಿ ದ್ರೌಪದಿ ಮುರ್ಮು - (೧೬ ಸೆಕೆಂಡ್ಸ್)**

<><><><>

ಚಿಲಿ ದೇಶದ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಫಾಂಟ್ ಅವರು ಐದು ದಿನಗಳ ಭಾರತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಿದರು. ಅವರೊಂದಿಗೆ ಸಚಿವರು, ಸಂಸತ್ ಸದಸ್ಯರು, ವ್ಯಾಪಾರ ಸಂಘಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗ ಆಗಮಿಸಿದೆ. ಬೋರಿಕ್ ಅವರು ಚಿಲಿ ಅಧ್ಯಕ್ಷರಾಗಿ ಭಾರತಕ್ಕೆ ನೀಡಿರುವ ಮೊದಲ ಭೇಟಿ ಇದಾಗಿದೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಅಧ್ಯಕ್ಷ ಬೋರಿಕ್ ಅವರನ್ನು ಭೇಟಿ ಮಾಡಿ, ಭಾರತ-ಚಿಲಿ ಸಹಕಾರವನ್ನು ಬಲಪಡಿಸುವ ಕುರಿತ ಅವರ ಬದ್ಧತೆಯನ್ನು ಶ್ಲಾಘಿಸಿದರು. ಚಿಲಿಯ ಅಧ್ಯಕ್ಷರು ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಡೆಸುವ ಚರ್ಚೆಗಳು ಹೊಸ ಪಾಲುದಾರಿಕೆಗಳನ್ನು ಬೆಳೆಸಲು ಮತ್ತು ದ್ವಿಪಕ್ಷೀಯ ಸಹಕಾರ ಹೆಚ್ಚಿಸಲು ಸಹಕಾರಿಯಾಗಲಿವೆ ಎಂದು ಡಾ. ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದರು. ಇಂದು ಮಧ್ಯಾಹ್ನದ, ಅಧ್ಯಕ್ಷ ಬೋರಿಕ್ ಭಾರತ-ಚಿಲಿ ಸಂಬಂಧಗಳ ಬಗ್ಗೆ ಪ್ರಧಾನಿ ಮೋದಿಯವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಬಳಿಕ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನೂ ಭೇಟಿ ಮಾಡಲಿದ್ದಾರೆ, ರಾಷ್ಟ್ರಪತಿಯವರು ಚಿಲಿ ಅಧ್ಯಕ್ಷರ ಗೌರವಾರ್ಥವಾಗಿ ಔತಣಕೂಟವನ್ನು ಆಯೋಜಿಸಲಿದ್ದಾರೆ. ಅಧ್ಯಕ್ಷ ಬೋರಿಕ್ ಇದೇ ೫ ರಂದು ಚಿಲಿಗೆ ತೆರಳುವ ಮುನ್ನ ಆಗ್ರಾ, ಮುಂಬೈ ಮತ್ತು ಬೆಂಗಳೂರಿಗೆ ಭೇಟಿ ನೀಡಲಿದ್ದಾರೆ.

<><><><>

ಕೇಂದ್ರ ಸರ್ಕಾರಿ ನೌಕರರಿಗೆ ಏಕೀಕೃತ ಪಿಂಚಣಿ ಯೋಜನೆ - ಯುಪಿಎಸ್ ಇಂದಿನಿಂದ ಜಾರಿಗೆ ಬರಲಿದೆ. ರಾಷ್ಟ್ರೀಯ ಪಿಂಚಣಿ ವ್ಯವಸ್ಥೆಯ ಅಡಿಯಲ್ಲಿ ಕೇಂದ್ರ ಸರ್ಕಾರ, ನೌಕರರಿಗೆ ಯುಪಿಎಸ್ ಅನ್ನು ಮತ್ತೊಂದು ಆಯ್ಕೆಯಾಗಿ ಪರಿಚಯಿಸಿದೆ. ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ- ಪಿಎಫ್‌ಆರ್‌ಡಿಎ  ಇತ್ತೀಚೆಗೆ ಯುಪಿಎಸ್ ಜಾರಿ ಸಂಬಂಧ ನಿಯಮಗಳನ್ನು ಪ್ರಕಟಿಸಿದೆ. ಈ ನಿಯಮಗಳು ಕೇಂದ್ರ ಸರ್ಕಾರಿ ನೌಕರರ ಮೂರು ಗುಂಪುಗಳಿಗೆ ಸಂಬಂಧಿಸಿವೆ. ಮೊದಲ ವರ್ಗದಲ್ಲಿ ೨೦೨೫ರ ಏಪ್ರಿಲ್ ೧ರಿಂದ ಅಸ್ತಿತ್ವದಲ್ಲಿರುವ ಸರ್ಕಾರಿ ಉದ್ಯೋಗಿಗಳನ್ನು ಒಳಗೊಂಡಿದೆ. ಎರಡನೇ ವರ್ಗದಲ್ಲಿ ೨೦೨೫ರ ಏಪ್ರಿಲ್ ೧ ಅಥವಾ ನಂತರ ಸೇವೆಗೆ ಹೊಸದಾಗಿ

ನೇಮಕವಾಗುವವರನ್ನು ಸೇರಿಸಲಾಗಿದೆ. ಮೂರನೇ ವರ್ಗ, ಹಳೆ ಪಿಂಚಣಿ ವ್ಯವಸ್ಥೆಯ ಭಾಗವಾಗಿದ್ದ ಮತ್ತು ಮಾರ್ಚ್ ೩೧ರಂದು ಅಥವಾ ಅದಕ್ಕೂ ಮೊದಲು ನಿವೃತ್ತರಾದ ಕೇಂದ್ರ ಸರ್ಕಾರಿ ನೌಕರರನ್ನು ಒಳಗೊಂಡಿದೆ. ಸೇವಾ ನಿವೃತ್ತಿ ಅಥವಾ ಸ್ವಯಂ ನಿವೃತ್ತಿ ಪಡೆದವರೂ ಕೂಡ ಅಂಥವರು, ಯುಪಿಎಸ್ ಯೋಜನೆಗೆ ಅರ್ಹರಾಗಿರುತ್ತಾರೆ. ಸುಮಾರು ೨೩ ಲಕ್ಷ ಕೇಂದ್ರ ಸರ್ಕಾರಿ ನೌಕರರು ಈ ಯೋಜನೆಯ ಪ್ರಯೋಜನ ಪಡೆಯಲಿದ್ದಾರೆ ಎಂದು ಹೇಳಲಾಗಿದೆ.

<><><><>

ಕೇಂದ್ರ ಯುವ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ ಆಯೋಜಿಸಿರುವ ಮೂರು ದಿನಗಳ ವಿಕಸಿತ ಭಾರತ ಯುವ ಸಂಸತ್ ದೆಹಲಿಯಲ್ಲಿಂದು ಆರಂಭವಾಗಲಿದೆ. ಈ ಕಾರ್ಯಕ್ರಮ ಯುವ ಸಮುದಾಯವನ್ನು ರಾಜಕೀಯ ಮತ್ತು ಸಾರ್ವಜನಿಕ ನೀತಿಗಳೊಂದಿಗೆ ಸಂಪರ್ಕ ಸಾಧಿಸಲು, ಆಡಳಿತ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ತೊಡಗಿಸಿಕೊಳ್ಳುವಿಕೆಯನ್ನು ಉತ್ತೇಜಿಸಲು ಪ್ರಬಲ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಕರ್ನಾಟಕ ಸೇರಿದಂತೆ, ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ, ೭೫ ಸಾವಿರಕ್ಕೂ ಹೆಚ್ಚು ಯುವಕರು, 'ಮೈ ಭಾರತ್ ಪೋರ್ಟಲ್' ಮೂಲಕ ತಮ್ಮ ವಿಡಿಯೋಗಳನ್ನು ಸಲ್ಲಿಸಿದ್ದಾರೆ. ಪ್ರತಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದಿಂದ ಒಟ್ಟು ೧೦೮ ಯುವಕರನ್ನು ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಲು ಆಯ್ಕೆ ಮಾಡಲಾಗಿದೆ. ಭಾಗವಹಿಸುವವರು "ಒಂದು ರಾಷ್ಟ್ರ, ಒಂದು ಚುನಾವಣೆ" ಮತ್ತು "ವಿಕಸಿತ ಭಾರತ್" ಕುರಿತು ಪ್ರಶ್ನೋತ್ತರ ಅವಧಿ ಸೇರಿದಂತೆ ಉನ್ನತ ಮಟ್ಟದ ಚರ್ಚೆಗಳು ಮತ್ತು ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲಿದ್ದಾರೆ. ಇವರು, ಲೋಕಸಭೆ ಮತ್ತು ರಾಜ್ಯಸಭಾ ಅಧಿವೇಶನಗಳಲ್ಲೂ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮ ಇದೇ ೩ ರಂದು ಮುಕ್ತಾಯಗೊಳ್ಳಲಿದ್ದು, ಅಂದು ವಿಕಸಿತ್ ಭಾರತ್ ಯುವ ಸಂಸತ್ ಪ್ರಶಸ್ತಿಗಳು ಮತ್ತು ರಾಷ್ಟ್ರೀಯ ಯುವ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತಿದೆ.

<><><><>

ತ್ರಿವಿಧ ದಾಸೋಹಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ೧೧೮ನೇ ಜಯಂತಿ ಹಾಗೂ ಗುರುವಂದನಾ ಮಹೋತ್ಸವವನ್ನು ವಿವಿಧ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಕರ್ನಾಟಕದ ತುಮಕೂರಿನ ಸಿದ್ಧಗಂಗಾ ಮಠದಲ್ಲಿ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಗದ್ದುಗೆ ಮಂದಿರದ ಮುಂಭಾಗದಿಂದ ಆರಂಭವಾದ ಸ್ವಾಮಿಜೀಗಳ ಕಂಚಿನ ಪುತ್ಥಳಿ ಹೊತ್ತ ರುದ್ರಾಕ್ಷಿ

ಮಂಟಪದ ಮೆರವಣಿಗೆಗೆ ಮಠಾಧ್ಯಕ್ಷ ಸಿದ್ದಲಿಂಗ ಸ್ವಾಮೀಜಿ ಚಾಲನೆ ನೀಡಿದರು. ಪದ್ಮಭೂಷಣ ಪುರಸ್ಕೃತ ಡಾ.ಶ್ರೀ ಶಿವಕುಮಾರ ಸ್ವಾಮೀಜಿಯವರ ಜಯಂತ್ಯೋತ್ಸವದ ಅಂಗವಾಗಿ ೧೧೮ ಮಕ್ಕಳಿಗೆ "ಶಿ" ಅಕ್ಷರದಿಂದ ಪ್ರಾರಂಭವಾಗುವ ಹೆಸರುಗಳನ್ನು ನಾಮಕರಣ ಮಾಡಲಾಯಿತು. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ, ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಿದ್ಧಗಂಗಾ ಮಠದ ಉತ್ತರಾಧಿಕಾರಿ ಶಿವಸಿದ್ದೇಶ್ವರ ಸ್ವಾಮೀಜಿ, ಶಾಸಕರಾದ ಜ್ಯೋತಿಗಣೇಶ್, ಬಿ.ಸುರೇಶ್ ಗೌಡ, ವಿಧಾನಪರಿಷತ್ ಸದಸ್ಯ ಚಿದಾನಂದಗೌಡ ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಶಿವಕುಮಾರಸ್ವಾಮೀಜಿ ಅವರ ೧೧೮ನೇ ಜಯಂತ್ಯೋತ್ಸವದ ಹಿನ್ನೆಲೆಯಲ್ಲಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ. ಪ್ರಧಾನಿ ಅವರು ತಮ್ಮ ಕನ್ನಡದ ಸಂದೇಶದಲ್ಲಿ, ಪರಮ ಪೂಜ್ಯ ಡಾ. ಶ್ರೀ ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿ ಅವರು ಕಾರುಣ್ಯ ಮತ್ತು ದಣಿವರಿಯದ ಸೇವೆಯ ದಾರಿದೀಪವೆಂದು ಸ್ಮರಿಸಿದ್ದಾರೆ. ನಿಸ್ವಾರ್ಥ ಸೇವೆಯು ಸಮಾಜವನ್ನು ಹೇಗೆ ಪರಿವರ್ತಿಸುತ್ತದೆ ಎನ್ನುವುದನ್ನು ಅವರು ತೋರಿಸಿಕೊಟ್ಟಿದ್ದರು. ನಾನಾ ಕ್ಷೇತ್ರಗಳಲ್ಲಿ ಅವರ ಅಸಾಧಾರಣ ಪ್ರಯತ್ನಗಳು ಮುಂದಿನ ಪೀಳಿಗೆಗೆ ಸ್ಫೂರ್ತಿ ನೀಡುತ್ತಲೇ ಇವೆ ಎಂದು ತಿಳಿಸಿದ್ದಾರೆ. ಸಮಾಜಿಕ ಮಾಧ್ಯಮದಲ್ಲಿ ಸ್ವಾಮಿಜಿಗಳಿಗೆ ಗೌರವ ನಮನ ಸಲ್ಲಿಸಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಶಿವಕುಮಾರ್ ಸ್ವಾಮೀಜಿ, ಕರುಣೆ ಮತ್ತು ನಿಸ್ವಾರ್ಥ ಸೇವೆಯ ಸಾಕಾರ ರೂಪಾವಾಗಿದ್ದರು. ಶಿಕ್ಷಣ ಮತ್ತು ಸಾಮಾಜಿಕ ಕಲ್ಯಾಣದ ಮೂಲಕ ದೀನ ದಲಿತರ ಉನ್ನತಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು.

<><><><>

ನಕ್ಸಲ್ ಮುಕ್ತ ಭಾರತ ನಿರ್ಮಾಣದತ್ತ ಸರ್ಕಾರ ದಾಪುಗಾಲಿಡುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಎಡಪಂಥೀಯ ಉಗ್ರವಾದದಿಂದ ಹೆಚ್ಚು ಪ್ರಭಾವಿತವಾಗಿರುವ ಜಿಲ್ಲೆಗಳ ಸಂಖ್ಯೆಯನ್ನು ೧೨ ರಿಂದ ಕೇವಲ ಆರಕ್ಕೆ ಇಳಿಸುವ ಮೂಲಕ ರಾಷ್ಟ್ರವು ಹೊಸ ಮೈಲಿಗಲ್ಲು ಸಾಧಿಸಿದೆ ಎಂದು ಅವರು ಹೇಳಿದ್ದಾರೆ. ೨೦೨೬ ಮಾರ್ಚ್ ೩೧ ರೊಳಗೆ ನಕ್ಸಲ್‌ವಾದವನ್ನು ಸಂಪೂರ್ಣವಾಗಿ ಬೇರುಸಹಿತ ಕಿತ್ತುಹಾಕಲು ಸಂಕಲ್ಪವನ್ನು ಭಾರತ ಹೊಂದಿದೆ ಎಂದು ಗೃಹ ಸಚಿವರು ಹೇಳಿದರು.

<><><><>

ಭಾರತೀಯ ಮೂಲದ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಭಾರತದ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ಕೊಡುಗೆ ನೀಡಲು ಉತ್ಸುಕತೆ ವ್ಯಕ್ತಪಡಿಸಿದ್ದಾರೆ. ತಮ್ಮ ಅನುಭವಗಳನ್ನು ಹಂಚಿಕೊಳ್ಳಲು ಮತ್ತು ದೇಶದಲ್ಲಿ ಬೆಳೆಯುತ್ತಿರುವ ಬಾಹ್ಯಾಕಾಶ ಗುರಿಗಳನ್ನು ಬೆಂಬಲಿಸುವುದಾಗಿ ತಿಳಿಸಿದ್ದಾರೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದ ವಿಸ್ತೃತ ಕಾರ್ಯಾಚರಣೆಯಿಂದ ಭೂಮಿಗೆ ಹಿಂದಿರುಗಿದ ಕೆಲವೇ ದಿನಗಳ ಬಳಿಕ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬಾಹ್ಯಾಕಾಶದಿಂದ ಭಾರತವನ್ನು ನೋಡಿದ ತಮ್ಮ ಅದ್ಭುತ ಅನುಭವವನ್ನು ಸ್ಮರಿಸಿದರು.

<><><>

ಸ್ಪೇನ್‌ನಲ್ಲಿಂದು ಸಂಜೆ ನಡೆಯಲಿರುವ ಮೆನೋರ್ಕಾ ಓಪನ್ ಟೆನಿಸ್‌ನ ಪುರುಷರ ಡಬಲ್ಸ್ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಅಗ್ರ ಶ್ರೇಯಾಂಕಿತ ಜೀವನ್ ನೆಡುಂಚೆಳಿಯನ್ ಮತ್ತು ಸಹ ಆಟಗಾರ ವಿಜಯ್ ಸುಂದರ್ ಪ್ರಶಾಂತ್ ಇಟಲಿ ಜೋಡಿ ಮ್ಯಾಟಿಯೊ ವವಾಸ್ಸೋರಿ ಮತ್ತು ಆಂಡ್ರಿಯಾ ವವಾಸ್ಸೋರಿ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಸಂಜೆ ೫ ಗಂಟೆಗೆ ಆರಂಭವಾಗಲಿದೆ. ಏತನ್ಮಧ್ಯೆ, ಮತ್ತೊರ್ವ ಭಾರತೀಯ ಟೆನಿಸ್ ಆಟಗಾರ ಅನಿರುದ್ಧ್ ಚಂದ್ರಶೇಖರ್, ಸ್ಪೇನ್‌ನ ಡೇವಿಡ್ ವೇಗಾ ಹೆರ್ನಾಂಡೆಜ್ ಅವರೊಂದಿಗೆ ಇಂದು ಅದೇ ವಿಭಾಗದಲ್ಲಿ ಮೂರನೇ ಶ್ರೇಯಾಂಕಿತ ಬ್ರಿಟನ್ ಜೋಶುವಾ ಪ್ಯಾರಿಸ್ ಮತ್ತು ಇಸ್ರೇಲ್‌ನ ಡೇನಿಯಲ್ ಕುಕಿಯರ್‌ಮನ್ ಜೋಡಿಯನ್ನು ಎದುರಿಸಲಿದ್ದಾರೆ.

<><><>

ಉತ್ತರಪ್ರದೇಶದ ಎಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>